ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಜ್ಞಾನ ಸಾಗರ ಆವರಣ, ವಿನಾಯಕನಗರ, ಕಂಟೋನ್ಮೆಂಟ್, ಬಳ್ಳಾರಿ – 583105
ಕುಲಸಚಿವರು(ಮೌಲ್ಯಮಾಪನ) ದೂರವಾಣಿ: 08392-241011

ಸಂಖ್ಯೆ: ವಿಶ್ರೀಕೃವಿಬ/ಸುವರ್ಣಾವಕಾಶ/ಪರೀಕ್ಷಾ/2025-26/ 2356 ದಿನಾಂಕ: 17.02.2026

# ಸುವರ್ಣಾವಕಾಶ ಪರೀಕ್ಷಾ ಶುಲ್ಕ ಅಧಿಸೂಚನೆ (CBCS)

**ವಿಷಯ:** ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಪದವಿ ಪೂರ್ಣಗೊಳಿಸಲು ಸುವರ್ಣಾವಕಾಶ (Golden Chance) ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕ ವಿಸ್ತರಿಸುವ ಕುರಿತು.

**ಉಲ್ಲೇಖ:**
1. ಸಾಮಾನ್ಯ ವಿದ್ಯಾವಿಷಯಕ ಪರಿಷತ್ ಸಭೆಯ ವಿಷಯ ಸಂಖ್ಯೆ 03 ದಿನಾಂಕ: 21.12.2024
2. ಸಾಮಾನ್ಯ ಸಿಂಡಿಕೇಟ್ ಸಭೆಯ ವಿಷಯ ಸಂಖ್ಯೆ: 06 ದಿನಾಂಕ: 23.12.2024
3. ಸಾಮಾನ್ಯ ಸಿಂಡಿಕೇಟ್ ಸಭೆಯ ಟೇಬಲ್ ಅಜೆಂಡಾ ವಿಷಯ ಸಂಖ್ಯೆ: 07 ದಿನಾಂಕ: 28.03.2025
4. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 01.12.2025

*****

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ 2010-11 ರಿಂದ 2019-20 ರವರೆಗೆ ವಿವಿಧ ಸ್ನಾತಕ/ಸ್ನಾತಕೋತ್ತರ/ಬಿ.ಇಡಿ ಪದವಿಗಳ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪರೀಕ್ಷೆಗಳನ್ನು ಆಯೋಜಿಸುವ ಸಂಬಂಧ ಎಲ್ಲಾ ಕೋರ್ಸ್‌ಗಳ ಎಲ್ಲಾ ಸೆಮಿಸ್ಟರ್‌ಗಳಿಗೆ ಸುವರ್ಣಾವಕಾಶ (Golden Chance) ಪರೀಕ್ಷೆಗಳನ್ನು ಆಯೋಜಿಸಲು ತೀರ್ಮಾನಿಸಲಾಗಿದೆ. ಈ ಪರೀಕ್ಷೆಗಳಿಗೆ ಅರ್ಹರಾದ ಅಭ್ಯರ್ಥಿಗಳು ಆನ್‌ಲೈನ್ (Online) ಮೂಲಕ ಅರ್ಜಿಗಳನ್ನು ಸಲ್ಲಿಸಲು ಈ ಕೆಳಗಿನಂತೆ ದಿನಾಂಕಗಳನ್ನು ವಿಸ್ತರಿಸಲಾಗಿದೆ.

**ಅರ್ಜಿ (ಶುಲ್ಕ ಪಾವತಿಸಲು) ಸಲ್ಲಿಸಲು ನಿಗದಿಪಡಿಸಿದ ದಿನಾಂಕಗಳು**

| ಕ್ರ.ಸಂ | ವಿವರ | ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | ದಿನಾಂಕಗಳು |
|---|---|---|---|
| 01 | ದಂಡ ಶುಲ್ಕ ರಹಿತ | 6500/- | 18.02.2026 ರಿಂದ 25.02.2026 ವರೆಗೆ |
| 02 | ದಂಡ ಶುಲ್ಕ ಪ್ರತಿ ದಿನಕ್ಕೆ ರೂ. 500/- ರಂತೆ | 6500 + 500 (ಪ್ರತಿ ದಿನಕ್ಕೆ) | 26.02.2026 ರಿಂದ 28.02.2026 ವರೆಗೆ |

ಈ ಪರೀಕ್ಷೆಗಳಿಗೆ ನಿಯಮಾನುಸಾರ ಅರ್ಹರಾದ ವಿದ್ಯಾರ್ಥಿಗಳು ಅರ್ಜಿಯನ್ನು Online ಮೂಲಕ ಮಾತ್ರ ಭರ್ತಿ ಮಾಡಲು ಅವಕಾಶವಿರುತ್ತದೆ. ವಿದ್ಯಾರ್ಥಿಗಳು ದಂಡ ಶುಲ್ಕ ಸಮೇತ ಇರುವ ಕೊನೆಯ ದಿನಾಂಕದೊಳಗೆ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. Offline ಮೂಲಕ ಭರ್ತಿ ಮಾಡಿದ ಅರ್ಜಿಗಳನ್ನು ವಿಶ್ವವಿದ್ಯಾಲಯವು ಪರಿಗಣಿಸುವುದಿಲ್ಲ.

**:ಪ್ರಾಂಶುಪಾಲರು ಹಾಗೂ ವಿದ್ಯಾರ್ಥಿಗಳಿಗೆ ಸೂಚನೆ:**

1. ಪರೀಕ್ಷಾರ್ಥಿಗಳು ಆನ್‌ಲೈನ್ (Online) ಮುಖಾಂತರ ಅರ್ಜಿ ಸಲ್ಲಿಸಲು http://student.logisys.org/vskub ನಲ್ಲಿ login ಆಗಿ ನೊಂದಣಿ ಸಂಖ್ಯೆ ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು ಗುರುತು ಮಾಡಿ ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ವಿದ್ಯಾರ್ಥಿಗಳು ಸಂಬಂಧಪಟ್ಟ ವಿಭಾಗದ ಮುಖ್ಯಸ್ಥರು/ಮಹಾವಿದ್ಯಾಲಯಗಳಲ್ಲಿ ಸಲ್ಲಿಸಬೇಕು.
2. ಈ ಪರೀಕ್ಷೆಗೆ ಅರ್ಜಿಗಳನ್ನು ಹಾರ್ಡ್ ಕಾಪಿ ಮೂಲಕ ವಿಶ್ವವಿದ್ಯಾಲಯವು ಸ್ವೀಕರಿಸುವುದಿಲ್ಲ.
3. ಈ ಪರೀಕ್ಷೆಯ ಶುಲ್ಕದಲ್ಲಿ ಯಾವ ವರ್ಗಕ್ಕೂ ವಿನಾಯಿತಿ ಇರುವುದಿಲ್ಲ.

4. ಪರೀಕ್ಷಾ ಶುಲ್ಕವನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಗಳನ್ನು ಯಾವದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ. ಮತ್ತು ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಕುಲಸಚಿವರು(ಮೌಲ್ಯಮಾಪನ)
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ

ಗೆ,
**ಸಂಬಂಧಿಸಿದ ಸ್ನಾತಕ/ಸ್ನಾತಕೋತ್ತರ/ಬಿ.ಇಡಿ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.**

**ಪ್ರತಿಗಳು:**
1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
2. ಕುಲಸಚಿವರು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
3. ಹಣಕಾಸು ಅಧಿಕಾರಿಗಳು ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರಿಗೆ ಮಾಹಿತಿಗಾಗಿ.
4. ಲಾಜಿಸಿಸ್ ಮುಖ್ಯ ಕಛೇರಿ, ಬೆಂಗಳೂರು. ರವರ ಮಾಹಿತಿಗಾಗಿ.
4. ಕಛೇರಿ ಪ್ರತಿ.